ಕರ್ನಾಟಕ ಸರ್ಕಾರ

ಸಂಖ್ಯೆ:ಪಿಯು/187/ಸಿಬ್ಬಂದಿ/ಸಿಆರ್-3/ಉ.ನೇ/2015-16(ಭಾಗ-4)

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಮಲ್ಲೇಶ್ವರಂ, 18ನೇ ಅಡ್ಡರಸ್ತೆ,
ಬೆಂಗಳೂರು-560012.
ದಿನಾಂಕ: 03-03-2022.

# ಜ್ಞಾಪನ

**ವಿಷಯ**:- ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಹುದ್ದೆಗೆ ಆಯ್ಕೆಯಾಗಿ, ನೇಮಕಾತಿ ಆದೇಶ ಪಡೆದು, ನಿಗದಿತ ಅವಧಿಯಲ್ಲಿ ಕರ್ತವ್ಯಕ್ಕೆ ಹಾಜರಾಗಿದ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸುವ ಬಗ್ಗೆ.

**ಉಲ್ಲೇಖ**:-1. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 35 ಡಿಜಿಓ 2009, ದಿನಾಂಕ: 15-05-14.

2. ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು, ಇವರ ಪತ್ರ ಸಂಖ್ಯೆ: ED/KEA/ADMN/CR-54/2014-15, ದಿನಾಂಕ:24-10-2019, 26-10-2019, 21-12-2019 ಹಾಗೂ 21-10-2020.
3. ಈ ಕಚೇರಿ ಸಮಸಂಖ್ಯೆ ಆದೇಶ ದಿನಾಂಕ:17-09-2021.
4. ಪ್ರಾಂಶುಪಾಲರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಹೊಸೂರು, ಶಿಕಾರಿಪುರ, ಶಿವಮೊಗ್ಗ, ಇವರ ಪತ್ರ ದಿನಾಂಕ:08-10-2021.
5. ಪ್ರಾಂಶುಪಾಲರು, ಸರ್ಕಾರಿ ಪದವಿ ಪೂರ್ವ ಕಾಲೇಜು,ಕೂಡ್ಲಿಗಿ, ವಿಜಯನಗರ, ಇವರ ಪತ್ರ ದಿನಾಂಕ:08-10-2021.

-*-

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿದ್ದ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು, ರವರು ಉಲ್ಲೇಖ-2ರ ವಿವಿಧ ದಿನಾಂಕಗಳಲ್ಲಿ ಆಯ್ಕೆಪಟ್ಟಿಯನ್ನು ಪ್ರಕಟಿಸಿ ಇಲಾಖೆಗೆ ಸಲ್ಲಿಸಲಾಗಿರುತ್ತದೆ. ಆಯ್ಕೆಯಾದ ಎಲ್ಲಾ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆಗಾಗಿ ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಅಭ್ಯರ್ಥಿಗಳ ದಾಖಲಾತಿಗಳನ್ನು ನೈಜತೆಗಾಗಿ ಕಳುಹಿಸಿ, ಅಭ್ಯರ್ಥಿಗಳಿಗೆ ದಿನಾಂಕ:11-08-2020 ರಿಂದ 03-09-2020ರ ವರೆಗೆ ಆನ್-ಲೈನ್ ಸ್ಥಳ ನಿಯುಕ್ತಿ ಕೌನ್ಸೆಲಿಂಗ್ ಏರ್ಪಡಿಸಲಾಗಿರುತ್ತದೆ. ಸದರಿ ದಿನಾಂಕದಂದು ನಡೆದ ಸ್ಥಳ ನಿಯುಕ್ತಿ ಕೌನ್ಸೆಲಿಂಗ್‌ಗೆ ಗೈರುಹಾಜರಾದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶ ನೀಡುವ ಸಂಬಂಧ ದಿನಾಂಕ:25-02-2021ರಂದು ಮರು ಸ್ಥಳನಿಯುಕ್ತಿ ಕೌನ್ಸೆಲಿಂಗ್ ಏರ್ಪಡಿಸಲಾಗಿರುತ್ತದೆ.

ಸ್ಥಳ ಆಯ್ಕೆ ಮಾಡಿಕೊಂಡ, ನೈಜತೆ ಪ್ರಮಾಣ ಪತ್ರ ಸ್ವೀಕೃತಗೊಂಡ ಎಲ್ಲಾ ಅರ್ಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸಲಾಗಿರುತ್ತದೆ. ಅಂತೆಯೇ, ಈ ಕೆಳಕಂಡ ಅಭ್ಯರ್ಥಿಗಳಿಗೂ ಉಲ್ಲೇಖ-3ರಂತೆ ನೇಮಕಾತಿ ಆದೇಶ ಹೊರಡಿಸಲಾಗಿರುತ್ತದೆ. ಆದರೆ ನೇಮಕಾತಿ ಆದೇಶದ ಷರತ್ತಿನಲ್ಲಿ ವಿವರಿಸಿದಂತೆ ನಿಗದಿತ ಕಾಲಾವಧಿಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವುದಿಲ್ಲವೆಂದು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ಉಲ್ಲೇಖ-4 ಹಾಗೂ 5ರ ಪತ್ರದಲ್ಲಿ ವರದಿ ನೀಡಿರುತ್ತಾರೆ.

ಅಭ್ಯರ್ಥಿಗಳ ವಿವರ ಈ ಕೆಳಕಂಡಂತಿದೆ:

| ಕ್ರ.ಸಂ. | ಅಭ್ಯರ್ಥಿಗಳ ಹೆಸರು | ವಿಷಯ | ಆಯ್ಕೆಯಾದ ಪ್ರವರ್ಗ |
|---|---|---|---|
| 01 | ನಾಗರಾಜ.ಎಸ್. | ಕನ್ನಡ | ಜಿ.ಎಂ. |
| 02 | ಚೈತ್ರ.ಎನ್.ಕೆ. | ವಾಣಿಜ್ಯಶಾಸ್ತ್ರ | ಜಿ.ಎಂ.ಹೆಚ್. |

..2

ಆದ್ದರಿಂದ, ಈ ಮೇಲೆ ವಿವರಿಸಿದ ಉಪನ್ಯಾಸಕ ಹುದ್ದೆಯ ಅಭ್ಯರ್ಥಿಗಳ ನೇಮಕಾತಿಯನ್ನು ಕರ್ನಾಟಕ ಸಿವಿಲ್ ಸೇವೆಗಳು(ಸಾಮಾನ್ಯ ನೇಮಕಾತಿ)ನಿಯಮಗಳು, 1977ರ ನಿಯಮ 18(3)ರ ಪ್ರಕಾರ ರದ್ದು ಪಡಿಸಿ ಆದೇಶಿಸಿದೆ.

ನಿರ್ದೇಶಕರು, 3/3
ಪದವಿ ಪೂರ್ವ ಶಿಕ್ಷಣ ಇಲಾಖೆ.

ರವರಿಗೆ:

ಮೇಲೆ ಹೆಸರಿಸಿರುವ ಅಭ್ಯರ್ಥಿಗಳಿಗೆ – ಮಾಹಿತಿಗಾಗಿ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
3. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು – ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು.
4. ಕಚೇರಿ/ಹೆಚ್ಚುವರಿ ಪ್ರತಿ.